# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 728 (599) |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವವರು | : | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |
| ಉತ್ತರಿಸುವ ದಿನಾಂಕ | : | 21.08.2026 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿನಲ್ಲಿ ಹೆಚ್ಚು ಸಂಖ್ಯೆಯ ಯುವಕ/ಯುವತಿಯರು ಶಿಕ್ಷಣ ಪಡೆದು ನಿರುದ್ಯೋಗ ಸಮಸ್ಯೆಯಿಂದಾಗಿ ಉದ್ಯೋಗಕ್ಕಾಗಿ ನೆರೆಯ ನಗರ/ಮಹಾನಗರ/ರಾಜ್ಯಗಳಿಗೆ ವಲಸೆ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿನ ಸ್ಥಳೀಯ ನಿರುದ್ಯೋಗಿ ಯುವಕ/ಯುವತಿಯರಿಗೆ ಉದ್ಯೋಗವಕಾಶಗಳನ್ನು ಒದಗಿಸಲು ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ಉದ್ಯೋಗ ಸೃಜನ ಯೋಜನೆ (PMEGP) ಹಾಗೂ ರಾಜ್ಯ ಸರ್ಕಾರದ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪಯೋಜನೆಯಡಿಯಲ್ಲಿ (60*40)ರ ಮೂಲಕ ಸ್ಥಳೀಯ ನಿರುದ್ಯೋಗಿ ಯುವಕ / ಯುವತಿಯರಿಗೆ ಸ್ವಯಂ ಉದ್ಯೋಗ ಕಲ್ಪಿಸಲು ಕ್ರಮವಹಿಸಲಾಗುತ್ತಿದೆ.<br><br>ಪ್ರಾದೇಶಿಕ ಅಸಮತೋಲನಾ ನಿವಾರಣೆಗೆ ಆರ್ಥಿಕವಾಗಿ/ಭೌಗೋಳಿಕವಾಗಿ/ಔದ್ಯೋಗಿಕವಾಗಿ ಹಿಂದುಳಿದ ತಾಲ್ಲೂಕುಗಳಿಗೆ ಕೈಗಾರಿಕಾ ನೀತಿ 2025-30 ರಲ್ಲಿ ಹೊಸದಾಗಿ ಪ್ರಾರಂಭಿಸುವ ಹಾಗೂ ವಿಸ್ತರಣಾ ಕಾರ್ಯಕ್ರಮದ ಕೈಗಾರಿಕೆಗಳಿಗೆ 3% / 5% ರಷ್ಟು ಹೆಚ್ಚುವರಿಯಾಗಿ ಪ್ರೋತ್ಸಾಹಗಳನ್ನು ಮತ್ತು ರಿಯಾಯಿತಿಗಳನ್ನು ನೀಡಲಾಗುತ್ತಿದೆ. |
| ಆ | ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳನ್ನು ಆಕರ್ಷಿಸಲು ಸರ್ಕಾರವು ಸಿಂಧನೂರು ತಾಲ್ಲೂಕಿನಲ್ಲಿ ಜಮೀನನ್ನು ಖರೀದಿಸಿ ಅಗತ್ಯ ಮೂಲಭೂತ ಸೌಕರ್ಯಗಳೊಂದಿಗೆ 'ಕೈಗಾರಿಕಾ ಪ್ರದೇಶ'ವನ್ನು ಅಭಿವೃದ್ಧಿಪಡಿಸುವ ಕುರಿತು ಸರ್ಕಾರದ ನಿಲುವೇನು; | ಸಿಂಧನೂರು ತಾಲ್ಲೂಕಿನಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳನ್ನು ಸ್ಥಾಪಿಸಲು ಕೈಗಾರಿಕೋದ್ಯಮಿಗಳಿಂದ ಕೈಗಾರಿಕಾ ಸ್ಥಾಪನೆಗೆ ಬೇಡಿಕೆ ಬಂದಲ್ಲಿ ಸರ್ಕಾರದ/ಮಂಡಳಿಯ ಅನುಮೋದನೆ ಪಡೆದ ನಂತರ ಭೂಸ್ವಾಧೀನ ಪ್ರಕ್ರಿಯೆಯನ್ನು ನಿಯಮಾನುಸಾರ ಪ್ರಾರಂಭಿಸಿ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸಲಾಗುವುದು. |
| ಇ | ಯಾವ ಕಾಲಮಿತಿಯೊಳಗೆ ಸಿಂಧನೂರು ತಾಲ್ಲೂಕಿನಲ್ಲಿ ಸರ್ಕಾರವು ಬೃಹತ್ ಮತ್ತು ಮಧ್ಯಮ ಕೈಗಾರಿಕೆಯನ್ನು ಆಕರ್ಷಿಸುವ ಹಿತದೃಷ್ಟಿಯಿಂದ 'ಕೈಗಾರಿಕಾ ಪ್ರದೇಶ'ವನ್ನು ಅಭಿವೃದ್ಧಿಪಡಿಸುತ್ತದೆಯೇ? | |

ಕಡತ ಸಂಖ್ಯೆ. ಸಿಐ 219 ಎಸ್‌ಪಿಐ 2026

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು